# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1060 (1168) |
| ಮಾನ್ಯ ಸದಸ್ಯರ ಹೆಸರು | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 13/03/2026 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ನೋಂದಾಯಿತ ಹಾಗೂ ಸಕ್ರಿಯ ಕಟ್ಟಡ ಕಾರ್ಮಿಕರ ಸಂಖ್ಯೆ ಎಷ್ಟು; ರಾಜ್ಯದಲ್ಲಿ ಕಟ್ಟಡ ಕಾರ್ಮಿಕರ ಕಾರ್ಡ್ ನೋಂದಣಿಯನ್ನು ಪರಿಶೀಲಿಸುವ ಸಂದರ್ಭದಲ್ಲಿ ನಕಲಿ ಅಥವಾ ಅನರ್ಹರು ಕಾರ್ಡ್ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅನರ್ಹರೆಂದು ಗುರುತಿಸಲು ಸರ್ಕಾರ ಅನುಸರಿಸಿದ ಮಾನದಂಡಗಳು ಯಾವುವು; ಕಟ್ಟಡ ಕಾರ್ಮಿಕರಾಗಿ ನೋಂದಣಿ ಪಡೆಯಲು ಅಗತ್ಯವಾದ ಅರ್ಹತೆಗಳೇನು; | ರಾಜ್ಯದಲ್ಲಿ ಪ್ರಸ್ತುತ 24.81 ಲಕ್ಷ ಕಾರ್ಮಿಕರು ನೋಂದಣಿಯಾಗಿರುತ್ತಾರೆ. ಕಟ್ಟಡ ಕಾರ್ಮಿಕರ ಕಾರ್ಡ್ ನೋಂದಣಿಯನ್ನು ಪರಿಶೀಲಿಸುವ ಸಂದರ್ಭದಲ್ಲಿ ನಕಲಿ ಅಥವಾ ಅನರ್ಹರು ಕಾರ್ಡ್ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಕಟ್ಟಡ ಕಾರ್ಮಿಕರಾಗಿ ನೋಂದಣಿ ಪಡೆಯಲು ಅಗತ್ಯವಾದ ಅರ್ಹತೆಗಳನ್ನು ಹೊಂದಿರದ ಕಾರ್ಮಿಕರನ್ನು ಸ್ಥಳ ಪರಿಶೀಲನೆ ಮೂಲಕ ಗುರುತಿಸಿ ಅನರ್ಹರೆಂದು ಪರಿಗಣಿಸಿ ಸದಸ್ಯತ್ವವನ್ನು ರದ್ದುಪಡಿಸಲಾಗಿರುತ್ತದೆ.<br><br>ಕಟ್ಟಡ ಕಾರ್ಮಿಕರಾಗಿ ನೋಂದಣಿ ಪಡೆಯಲು ಅಗತ್ಯವಾದ ಅರ್ಹತೆಗಳನ್ನು **ಅನುಬಂಧ-01ರಲ್ಲಿ** ನೀಡಿದೆ. |
| ಆ) | ರದ್ದುಪಡಿಸಿದ ಅನರ್ಹ ಕಟ್ಟಡ ಕಾರ್ಮಿಕರ ಕಾರ್ಡ್ ಹೊಂದಿದ್ದವರು ಈಗಾಗಲೇ ಪಡೆದಿರುವ ಸೌಲಭ್ಯಗಳನ್ನು ಹಿಂಪಡೆಯಲಾಗಿದೆಯೇ;<br>ಅನರ್ಹ ಕಾರ್ಡ್ ಗಳನ್ನು ರದ್ದುಪಡಿಸುವ ವೇಳೆ ನೈಜ ಅರ್ಹ ಕಾರ್ಮಿಕರಿಗೆ<br>ಅನ್ಯಾಯವಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಮರು ನೋಂದಣಿಗೆ ಅವಕಾಶ ಕಲ್ಪಿಸಿರುವುದೇ; (ನಿಯಮಗಳ ಮಾಹಿತಿಯನ್ನು ಒದಗಿಸುವುದು) | ಮಂಡಳಿಯಲ್ಲಿ ನೋಂದಣಿಯಾಗಿ ವಿವಿಧ ಸೌಲಭ್ಯ ಕೋರಿ ಅರ್ಜಿಯೊಂದಿಗೆ ಸಲ್ಲಿಸಿದ ದಾಖಲೆಗಳ ಆಧಾರದ ಮೇಲೆ ಸೌಲಭ್ಯಗಳನ್ನು ನೀಡಲಾಗಿದ್ದು, ವಿತರಿಸಲಾದ ಯಾವುದೇ ಸೌಲಭ್ಯಗಳನ್ನು ಫಲಾನುಭವಿಗಳಿಂದ ಹಿಂಪಡೆದುಕೊಂಡಿರುವುದಿಲ್ಲ.<br><br>ಅನರ್ಹ ಕಾರ್ಡ್‌ಗಳನ್ನು ರದ್ದುಪಡಿಸಿದ ಫಲಾನುಭವಿಗಳಿಗೆ ಇದರ ವಿರುದ್ಧ ಮೇಲ್ಮನವಿ ಸಲ್ಲಿಸಲು ಅವಕಾಶ ನೀಡಲಾಗಿದ್ದು, ನೈಜ ಕಾರ್ಮಿಕರಿಗೆ ಅನ್ಯಾಯವಾದ ಪ್ರಕರಣಗಳು ಮಂಡಳಿಯಲ್ಲಿ ವರದಿಯಾಗಿರುವುದಿಲ್ಲ.<br><br>ಮಂಡಳಿಯ ನೋಂದಣಿ ಪ್ರಕ್ರಿಯೆಯು ನಿರಂತರವಾಗಿ ನಡೆಯುತ್ತಿದ್ದು, ಅರ್ಹತಾ ಮಾನದಂಡಗಳನ್ನು ಪೂರೈಸಿದ ಯಾವುದೇ ಕಾರ್ಮಿಕರು ಫಲಾನುಭವಿಯಾಗಿ ನೋಂದಣಿಯಾಗಲು ಅವಕಾಶವಿರುತ್ತದೆ. |

<table>
<tr>
<td>ಇ)</td>
<td>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಕಾರ್ಮಿಕರನ್ನು ಅನರ್ಹರೆಂದು ಗುರುತಿಸಿ ಗುರುತಿನ ಚೀಟಿಗಳನ್ನು ರದ್ದುಪಡಿಸಲಾಗಿದೆ; ಕಟ್ಟಡ ಕಾರ್ಮಿಕರಿಗೆ ನೀಡಲಾಗುತ್ತಿರುವ ವಿವಿಧ ಕಲ್ಯಾಣ ಸೌಲಭ್ಯಗಳ (ಪಿಂಚಣಿ, ಟೂಲ್ ಕಿಟ್ ಹರಿಗೆ ಶಿಕ್ಷಣ, ವೈದ್ಯಕೀಯ ಅಪಘಾತ ಪರಿಹಾರ ಮದುವೆ ಸಹಾಯಧನ ಇತ್ಯಾದಿ) ವಿವರ ಹಾಗೂ ಕಳೆದ ಮೂರು ವರ್ಷಗಳಲ್ಲಿ ಖರ್ಚಾದ ಮೊತ್ತ ಎಷ್ಟು;</td>
<td>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ರದ್ದುಪಡಿಸಲಾದ ಕಾರ್ಡ್‌ಗಳ ಸಂಖ್ಯೆಯು ಈ ಕೆಳಕಂಡಂತೆ ಇರುತ್ತದೆ.
<table>
<tr><th>ಕ್ರ. ಸಂ.</th><th>ಜಿಲ್ಲೆ</th><th>ರದ್ದುಪಡಿಸಲಾದ ಕಾರ್ಡ್‌ಗಳ ಸಂಖ್ಯೆ</th></tr>
<tr><td>01</td><td>ದಕ್ಷಿಣ ಕನ್ನಡ</td><td>1140</td></tr>
<tr><td>02</td><td>ಉಡುಪಿ</td><td>404</td></tr>
</table>
ಕಟ್ಟಡ ಕಾರ್ಮಿಕರಿಗೆ ನೀಡಲಾಗುತ್ತಿರುವ ವಿವಿಧ ಕಲ್ಯಾಣ ಸೌಲಭ್ಯಗಳ (ಪಿಂಚಣಿ, ಟೂಲ್ ಕಿಟ್ ಹೆರಿಗೆ ಶಿಕ್ಷಣ, ವೈದ್ಯಕೀಯ ಅಪಘಾತ ಪರಿಹಾರ ಮದುವೆ ಸಹಾಯಧನ ಇತ್ಯಾದಿ) ವಿವರಗಳನ್ನು ಅನುಬಂಧ-02ರಲ್ಲಿ ನೀಡಿದೆ.<br>
ಕಳೆದ 03 ವರ್ಷಗಳಲ್ಲಿ ಖರ್ಚಾದ ಮೊತ್ತ ಈ ಕೆಳಗಿನಂತಿದೆ.
<table>
<tr><th>ಕ್ರ. ಸಂ.</th><th>ಜಿಲ್ಲೆ</th><th>ಖರ್ಚಾದ ಮೊತ್ತ (ರೂ.ಕೋಟಿಗಳಲ್ಲಿ)</th></tr>
<tr><td>1</td><td>ದಕ್ಷಿಣ ಕನ್ನಡ</td><td>123.50</td></tr>
<tr><td>2</td><td>ಉಡುಪಿ</td><td>67.32</td></tr>
</table>
</td>
</tr>
<tr>
<td>ಈ)</td>
<td>ರಾಜ್ಯದಲ್ಲಿ ನೋಂದಾಯಿತ ಹಾಗೂ ಸಕ್ರಿಯ ಕಟ್ಟಡ ಕಾರ್ಮಿಕರ ವಿವರಗಳನ್ನು ಕಾರ್ಮಿಕ ಇಲಾಖಾ ವೆಬ್ ಸೈಟ್ ನಲ್ಲಿ ಹಾಗೂ ಸ್ಥಳೀಯ ಮಟ್ಟದಲ್ಲಿ ಅಂದರೆ ಜಿಲ್ಲೆ, ಕಾರ್ಮಿಕ ವೃತ್ತ, ತಾಲ್ಲೂಕು ಹೋಬಳಿ ಗ್ರಾಮ ಪಂಚಾಯಿತಿ ಮತ್ತು ಗ್ರಾಮ ಮಟ್ಟದಲ್ಲಿ ಪಾರದರ್ಶಕವಾಗಿ ಪ್ರಕಟಿಸಲು ಸರ್ಕಾರ ಕ್ರಮ ವಹಿಸುವುದೇ; ಯಾವ ಕಾಲಮಿತಿಯೊಳಗೆ ಪ್ರಕಟಿಸಲಾಗುವುದು.</td>
<td>ನೋಂದಾಯಿತ ಕಾರ್ಮಿಕರ ವಿವರಗಳಾದ ನೋಂದಣಿ ಸಂಖ್ಯೆ, ವಿಳಾಸ, ದೂರವಾಣಿ ಸಂಖ್ಯೆ, ಕುಟುಂಬ ಸದಸ್ಯರ ವಿವರ ಇತ್ಯಾದಿ ಮಾಹಿತಿಗಳಿದ್ದು, ಇದು ಕಾರ್ಮಿಕರ ಖಾಸಗಿ ಮಾಹಿತಿಯಾಗಿರುವುದರಿಂದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವುದಿಲ್ಲ.</td>
</tr>
</table>

**ಕಾಇ 105ಎಲ್‌ಇಟಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

## ಅನುಬಂಧ-01

## ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ನೋಂದಣಿಯಾಗುವ ವಿಧಾನ

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ರ ಕಲಂ 12 ರ ಪ್ರಾವದಾನಗಳನ್ವಯ ನೋಂದಣಿ ಪೂರ್ವದ 12 ತಿಂಗಳ ಅವಧಿಯಲ್ಲಿ (ಒಂದು ವರ್ಷದಲ್ಲಿ) 90 ದಿನ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ 18-60ರ ವಯೋಮಾನದ ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಲು ಮಂಡಳಿಯ ತಂತ್ರಾಂಶ https://kbocwwb.karnataka.gov.in/login ಲಾಗಿನ್‌ನಲ್ಲಿ ನಿಗಧಿಪಡಿಸಿರುವ ಅರ್ಜಿಯನ್ನು ಭರ್ತಿಮಾಡಿ ನೋಂದಣಿ ಮಾಡಬಹುದಾಗಿದೆ.

### ನೋಂದಣಿಗಾಗಿ ಸಲ್ಲಿಸಬೇಕಾದ ಅಗತ್ಯ ದಾಖಲೆಗಳು:

ಎ) ಉದ್ಯೋಗ ಪ್ರಮಾಣ ಪತ್ರ: ಕಟ್ಟಡದ ಮಾಲೀಕರು / ಗುತ್ತಿಗೆದಾರರು, CREDAI (Confederation of Real Estate Developers Association of India), BAI (Builders Association of India) ಅಥವಾ ಕರ್ನಾಟಕ ಸ್ಟೇಟ್ ಕಾಂಟ್ರಾಕ್ಟರ್ ಅಸೋಸಿಯೇಷನ್ ನವರು ನಮೂನೆ - V(A) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ' ಅಥವಾ ನೋಂದಾಯಿತ ಕಾರ್ಮಿಕರ ಸಂಘಗಳು ನಮೂನೆ- V(B) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ' ಅಥವಾ ಕಾರ್ಮಿಕ ಅಧಿಕಾರಿ / ಹಿರಿಯ ಕಾರ್ಮಿಕ ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರು ನಮೂನೆ- V(C) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ' ಅಥವಾ ಪಂಚಾಯತಿ ಅಭಿವೃದ್ಧಿ ಅಧಿಕಾರಿ / ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ನಮೂನೆ- V(D) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ.

ಬಿ) ಅರ್ಜಿದಾರರ ಬ್ಯಾಂಕ್ ಪುಸ್ತಕದ ಮುಖಪುಟದ ನಕಲು ಪ್ರತಿ

ಸಿ) ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ

ಡಿ) ಅರ್ಜಿದಾರರು ಒಂದು ವರ್ಷದಲ್ಲಿ ಕನಿಷ್ಠ 90 ದಿನಗಳ ಕಾಲ ಕಟ್ಟಡ ಅಥವಾ ಇತರೆ ನಿರ್ಮಾಣ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸಿದ ಬಗ್ಗೆ ಸ್ವಯಂ ಧೃಢೀಕರಣ ಪ್ರಮಾಣ ಪತ್ರ ಮತ್ತು ಲಭ್ಯವಿದ್ದಲ್ಲಿ ವೇತನ ಚೀಟಿ ಅಥವಾ ಹಾಜರಾತಿ ವಹಿ.

## ಅನುಬಂಧ-02

## ಮಂಡಳಿಯ ವತಿಯಿಂದ ಫಲಾನುಭವಿಗಳು ಮತ್ತು ಅವಲಂಭಿತರಿಗೆ ನೀಡುತ್ತಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.3,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೇನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-.
8. **ಅಂತ್ಯಕ್ರಿಯೆ ವೆಚ್ಚ: ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ.1,46,000/-** ಸಹಾಯಧನ.
9. **ಶೈಕ್ಷಣಿಕ ಧನಸಹಾಯ**

| ಕ್ರ. ಸಂ. | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತ್ತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| 1 | 1ನೇ ತರಗತಿಯಿಂದ 5ನೇ ತರಗತಿ | 1,800/- | - |
| 2 | 6ನೇ ತರಗತಿಯಿಂದ 8ನೇ ತರಗತಿ | 2,400/- | - |
| 3 | 9 ಮತ್ತು 10ನೇ ತರಗತಿ | 3,000/- | - |
| 4 | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | 6,000/- | - |

| ಕ್ರ. ಸಂ. | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತ್ತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| 5 | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್‌ಗಳು | 10,000/- | - |
| 6 | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | 12,000/- | - |
| 7 | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವಗಳು | 15,000/- | 20,000/- |
| 8 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ **Vocational** ವೃತ್ತಿಪರ ಕೋರ್ಸ್‌ಗಳು ಕಾನೂನು ಪದವಿ ಸಹಿತ (Professional Courses) | 20,000/- | 25,000/- |
| 9 | ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | 25,000/- | 35,000/- |
| 10 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Para Medical Courses) | 20,000/- | 25,000/- |
| 11 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | 25,000/- | 35,000/- |
| 12 | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | 40,000/- | 50,000/- |
| 13 | ಪಿಹೆಚ್‌ಡಿ/ಎಮ್‌ಫಿಲ್ (03 ವರ್ಷ ಅವಧಿಯವರೆಗೆ) | 40,000/- | - |
| 14 | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | 50,000/- | 60,000/- |

10. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/- ವರೆಗೆ.**
11. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಕೆಲಸದ ಸ್ಥಳದಲ್ಲಿ **ಮರಣ** ಹೊಂದಿದ್ದಲ್ಲಿ **ರೂ.8,00,000/- ಹಾಗೂ** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-.**

12. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**

13. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ. 60,000/-.**

14. **ತಾಯಿ ಮಗು ಸಹಾಯ ಹಸ್ತ**: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ.

15. **ಸುರಕ್ಷತಾ ಕಿಟ್**: ನೋಂದಾಯಿತ ಕಾರ್ಮಿಕರ ವೃತ್ತಿಗನುಗುಣವಾಗಿ ಸುರಕ್ಷತಾ ಕಿಟ್‌ಗಳ ವಿತರಣೆ

16. **ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆ**: ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯ ತಪಾಸಣೆ ಮಾಡುವ ಮೂಲಕ ಅವಶ್ಯಕ ಔಷಧೋಪಚಾರಗಳ ವಿತರಣೆ

17. **ಪ್ರೀವೆಂಟಿವ್ ಹೆಲ್ತ್ ಕೇರ್ ಯೋಜನೆ**: ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯದ ಮುನ್ನೆಚ್ಚರಿಗಾಗಿ ನಿಗಧಿತ 23 ರೀತಿಯ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಿ ವೈದ್ಯಕೀಯ ವರದಿಗಳ ವಿತರಣೆ